



ದಿನಾಂಕ:04-12-2023 ರಂದು ಬೆಳಗಾವಿಯಲ್ಲಿ ನಡೆದ ಚಳಿಗಾಲ ಅಧಿವೇಶನದ ಮೊದಲ ದಿನ ಸೋಮವಾರ ಸುವರ್ಣ ಸೌಧದಲ್ಲಿ ಸಾಯಂಕಾಲ ನಡೆದ ಶಾಶ್ವತ ವಿದ್ಯುತ್ತೀಕರಣ ಉದ್ಘಾಟನಾ ಕಾರ್ಯಕ್ರಮದಲ್ಲಿ ಸನ್ಮಾನ್ಯ ಶ್ರೀ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಕಾರ್ಯಕ್ರಮ ಉದ್ಘಾಟಿಸಿ ಸುವರ್ಣ ಸೌಧಕ್ಕೆ ಅಲಂಕರಿಸಿದ ವಿದ್ಯುತ್ ಅಲಂಕಾರ ನೋಡಿ ಖುಷಿ ಪಟ್ಟರು. ಸಮಾರಂಭದಲ್ಲಿ ಘನ ಉಪಸ್ಥಿತಿ ವಹಿಸಿದ್ದ ಸಭಾಪತಿಗಳಾದ ಸನ್ಮಾನ ಶ್ರೀ ಬಸವರಾಜ್ ಹೊರಟ್ಟಿ ಸಭಾಧ್ಯಕ್ಷರಾದ ಸನ್ಮಾನ್ಯ ಶ್ರೀ ಯು.ಟಿ ಖಾದರ್ ಅವರು ಕಾರ್ಯಕ್ರಮದ ಘನತೆ ಹೆಚ್ಚಿಸಿದರು.

ಸಮಾರಂಭದಲ್ಲಿ ಹಲವಾರು ಹಿರಿಯ ಸಚಿವರು, ಶಾಸಕರು, ವಿಧಾನಪರಿಷತ್ ಸದಸ್ಯರು ಹಿರಿಯ ಅಧಿಕಾರಿಗಳು ಸೇರಿದಂತೆ ಹಲವಾರು ಗಣ್ಯಮಾನ್ಯರು ಉಪಸ್ಥಿತರಿದ್ದರು.